**National**
**Kannada**
**19.08.2025 1935 hrs**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ವಿರೋಧ ಪಕ್ಷಗಳ ಗದ್ದಲದ ನಡುವೆ ಸಂಸತ್ತಿನ ಉಭಯ ಸದನಗಳ ಕಲಾಪ ನಾಳೆಗೆ ಮುಂದೂಡಿಕೆ
2. ಜಮ್ಮು-ಕಾಶ್ಮೀರ ಕಿಶ್ತ್ವಾರ್ ಮೇಘಸ್ಫೋಟ ; ಸಾವಿನ ಸಂಖ್ಯೆ ೬೪ಕ್ಕೆ ಏರಿಕೆ
3. ಉಪರಾಷ್ಟ್ರಪತಿ ಚುನಾವಣೆ ; ಸುಪ್ರೀಂಕೋರ್ಟ್‌ನ ಮಾಜಿ ನ್ಯಾಯಮೂರ್ತಿ ಬಿ. ಸುದರ್ಶನ್ ರೆಡ್ಡಿ ಐಎನ್‌ಡಿಐಎ ಅಭ್ಯರ್ಥಿ
4. ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್ ಇಂದಿನಿಂದ ಮೂರು ದಿನ ರಷ್ಯಾ ಭೇಟಿ
5. ಮುಂಬರುವ ಏಷ್ಯಾ ಕಪ್‌ಗೆ ಭಾರತ ತಂಡ ಪ್ರಕಟಿಸಿದ ಬಿಸಿಸಿಐ

<><><><>

ವಿವಿಧ ವಿಷಯಗಳ ಕುರಿತು ವಿರೋಧ ಪಕ್ಷಗಳ ಗದ್ದಲದ ನಂತರ ಸಂಸತ್ತಿನ ಉಭಯ ಸದನಗಳನ್ನು ದಿನದ ಮಟ್ಟಿಗೆ ಮುಂದೂಡಲಾಗಿದೆ. ಲೋಕಸಭೆ ಎರಡನೇ ಬಾರಿ ಮುಂದೂಡಿಕೆಯಾದ ನಂತರ ಮಧ್ಯಾಹ್ನ ೨ ಗಂಟೆಗೆ ಸದನ ಸಭೆ ಸೇರಿದಾಗ, ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಭಾರತದ ಮೊದಲ ಗಗನಯಾತ್ರಿ ಕ್ಯಾಪ್ಟನ್ ಶುಭಾಂಶು ಶುಕ್ಲಾ ಅವರ ಕುರಿತು ವಿಶೇಷ ಚರ್ಚೆಯನ್ನು ಸದನವು ಪುನರಾರಂಭಿಸಿತು, ೨೦೪೭ರ ವೇಳೆಗೆ ವಿಕಸಿತ ಭಾರತಕ್ಕಾಗಿ ಬಾಹ್ಯಾಕಾಶ ಕಾರ್ಯಕ್ರಮದ ನಿರ್ಣಾಯಕ ಪಾತ್ರದ ಮೇಲೆ ಕೇಂದ್ರೀಕರಿಸಿತು. ಚರ್ಚೆಯಲ್ಲಿ ಭಾಗವಹಿಸಿದ ಬಿಜೆಪಿ ಸಂಸದ ನಿಶಿಕಾಂತ್ ದುಬೆ, ವಿರೋಧ ಪಕ್ಷವು ಕಲಾಪಗಳಿಗೆ ಅಡ್ಡಿಪಡಿಸುತ್ತಿದೆ ಮತ್ತು ಸದನವು ಅಂತಹ ಪ್ರಮುಖ ವಿಷಯವನ್ನು ಚರ್ಚಿಸಲು ಅವಕಾಶ ನೀಡುತ್ತಿಲ್ಲ ಎಂದು ಆರೋಪಿಸಿದರು. ಶುಭಾಂಶು ಶುಕ್ಲಾ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಭಾರತದ ಮೊದಲ ಗಗನಯಾತ್ರಿಯಾಗಿ ಭಾರತದ ೧೪೦ ಕೋಟಿ ಜನಸಂಖ್ಯೆಯನ್ನು ಪ್ರತಿನಿಧಿಸುತ್ತಾರೆ ಎಂದು ಅವರು ಹೇಳಿದರು. ವಿರೋಧ ಪಕ್ಷದ ಸದಸ್ಯರ ಗದ್ದಲದ ದೃಶ್ಯಗಳ ನಡುವೆ ಸದನವನ್ನು ಸಂಜೆ ೪ ಗಂಟೆಯವರೆಗೆ ಮುಂದೂಡಲಾಗಿದ್ದರಿಂದ ಅವರು ತಮ್ಮ ಭಾಷಣವನ್ನು ಪೂರ್ಣಗೊಳಿಸಲು ಸಾಧ್ಯವಾಗಲಿಲ್ಲ. ೪ ಗಂಟೆಗೆ ಮತ್ತೆ ಕಲಾಪ ಸೇರಿದಾಗ ಗದ್ದಲದ ನಡುವೆ ಎರಡೂ ಸದನಗಳನ್ನು ನಾಳೆಗೆ ಮುಂದೂಡಲಾಯಿತು.

<><><><>

ಜಮ್ಮು ಮತ್ತು ಕಾಶ್ಮೀರದಲ್ಲಿ, ಕಿಶ್ತ್ವಾರ್ ಜಿಲ್ಲೆಯ ಮೇಘಸ್ಫೋಟ ಪೀಡಿತ ಚಿಸೋಟಿ ಗ್ರಾಮದಲ್ಲಿ ಮಹಿಳೆಯೊಬ್ಬರ ಮೃತದೇಹ ಪತ್ತೆಯಾಗಿದ್ದು, ಸಾವಿನ ಸಂಖ್ಯೆ ೬೪ಕ್ಕೆ ಏರಿದೆ. ವ್ಯಾಪಕವಾದ ರಕ್ಷಣಾ ಮತ್ತು ಪರಿಹಾರ ಕಾರ್ಯಾಚರಣೆ ಇಂದು ಆರನೇ ದಿನಕ್ಕೆ ಕಾಲಿಟ್ಟಿದೆ. ರಕ್ಷಣಾ ತಂಡಗಳು ಅನೇಕ ಸ್ಥಳಗಳಲ್ಲಿ, ವಿಶೇಷವಾಗಿ ಲಂಗರ್ ಸ್ಥಳದ ಬಳಿಯ ಪ್ರಮುಖ ಅಪಘಾತದ ಸ್ಥಳದಲ್ಲಿ, ಮಣ್ಣು ಸಾಗಣೆದಾರರು ಮತ್ತು ಸ್ನಿಫರ್ ನಾಯಿಗಳು ಸೇರಿದಂತೆ ಭಾರೀ ಯಂತ್ರೋಪಕರಣಗಳನ್ನು ಬಳಸಿಕೊಂಡು ಅವಶೇಷಗಳನ್ನು ಶೋಧಿಸುತ್ತಿವೆ. ಇನ್ನೂ ಒಂದು ಶವ ಪತ್ತೆಯಾಗುವುದರೊಂದಿಗೆ, ಚಿಸೋಟಿಯಲ್ಲಿ ಮೇಘಸ್ಫೋಟದಿಂದ ಉಂಟಾದ ಹಠಾತ್ ಪ್ರವಾಹದಲ್ಲಿ ಸಾವನ್ನಪ್ಪಿದವರ ಸಂಖ್ಯೆ ೬೪ಕ್ಕೆ ಏರಿದೆ. ಸತ್ತವರಲ್ಲಿ ಮೂವರು ಸಿಐಎಸ್‌ಎಫ್ ಸಿಬ್ಬಂದಿ ಮತ್ತು ಜೆ & ಕೆ ಪೊಲೀಸರ ಒಬ್ಬರು ವಿಶೇಷ ಪೊಲೀಸ್ ಅಧಿಕಾರಿ ಸೇರಿದ್ದಾರೆ. ಒಟ್ಟು ೧೬೭ ಜನರನ್ನು ರಕ್ಷಿಸಲಾಗಿದ್ದು, ಕಾಣೆಯಾದವರ ಸಂಖ್ಯೆ ೩೯ ಕ್ಕೆ ಇಳಿದಿದೆ. ರಕ್ಷಣಾ ಮತ್ತು ಪರಿಹಾರ ಕಾರ್ಯಾಚರಣೆ ಯುದ್ಧೋಪಾದಿಯಲ್ಲಿ ನಡೆಯುತ್ತಿದ್ದು, ಪ್ರದೇಶವನ್ನು ಪರಿಶೀಲಿಸಲು ಒಂದು ತಂಡವನ್ನು ಕೆಳಕ್ಕೆ ಕಳುಹಿಸಲಾಗುತ್ತಿದೆ. ಸೇನೆಯ ಐದು ಪರಿಹಾರ ತಂಡಗಳು ರಕ್ಷಣಾ ಮತ್ತು ಪರಿಹಾರ ಕಾರ್ಯಾಚರಣೆಗಳಲ್ಲಿ ತೊಡಗಿಸಿಕೊಂಡಿದ್ದು, ಹೆಚ್ಚುವರಿ ವೈದ್ಯಕೀಯ ತಂಡಗಳನ್ನು ನಿಯೋಜಿಸಲಾಗಿದ್ದು ಪ್ರಯತ್ನಗಳನ್ನು ಮತ್ತಷ್ಟು ತೀವ್ರಗೊಳಿಸಲಾಗಿದೆ.

<><><>

ದೇಶದ ರಾಜತಾಂತ್ರಿಕ ಪ್ರಯತ್ನಗಳು ಅದರ ದೇಶೀಯ ಅಗತ್ಯಗಳಿಗೆ ಅನುಗುಣವಾಗಿರಬೇಕು ಮತ್ತು ೨೦೪೭ ರ ವೇಳೆಗೆ ವಿಕ್ಷಿತ ಭಾರತವಾಗುವ ಗುರಿಯನ್ನು ಹೊಂದಿರಬೇಕು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದರು.  ತರಬೇತಿಯಲ್ಲಿರುವ ಭಾರತೀಯ ವಿದೇಶಾಂಗ ಸೇವೆಯ ಅಧಿಕಾರಿಗಳನ್ನು ಇಂದು ರಾಷ್ಟ್ರಪತಿ ಭವನದಲ್ಲಿ ಭೇಟಿ ಮಾಡಿದ ಅವರು, ಭಾರತೀಯ ವಿದೇಶಾಂಗ ಸೇವೆಗೆ ಸೇರ್ಪಡೆಗೊಂಡ ಅಧಿಕಾರಿಗಳನ್ನು ಅಭಿನಂದಿಸಿದ ರಾಷ್ಟ್ರಪತಿಗಳು, ದೇಶದ ನಾಗರಿಕತೆಯ ಬೌದ್ಧಿಕ ಮೌಲ್ಯಗಳಾದ ಶಾಂತಿ, ಬಹುತ್ವ, ಅಹಿಂಸೆ ಮತ್ತು ಸಂವಾದವನ್ನು ತಮ್ಮಲ್ಲಿ ಅಳವಡಿಸಿಕೊಳ್ಳುವಂತೆ ಒತ್ತಾಯಿಸಿದರು.

<><><>

ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಇಂದು ಸುಪ್ರೀಂ ಕೋರ್ಟ್‌ನ ಮಾಜಿ ನ್ಯಾಯಮೂರ್ತಿ ಬಿ. ಸುದರ್ಶನ್ ರೆಡ್ಡಿ ಅವರನ್ನು ಉಪರಾಷ್ಟ್ರಪತಿ ಚುನಾವಣೆಗೆ ಐಎನ್‌ಡಿಐಎ ಬಣದಿಂದ ಅಭ್ಯರ್ಥಿ ಎಂದು ಘೋಷಿಸಿದರು. ಇಂದು ಮಧ್ಯಾಹ್ನ ನವದೆಹಲಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ನಿರ್ಧಾರವನ್ನು ಪ್ರಕಟಿಸಿದ ಖರ್ಗೆ, ಎಲ್ಲಾ ವಿರೋಧ ಪಕ್ಷಗಳು ಇದು ಸೈದ್ಧಾಂತಿಕ ಯುದ್ಧ ಎಂದು ಒಪ್ಪಿಕೊಂಡಿವೆ

ಮತ್ತು ಅದಕ್ಕಾಗಿಯೇ ಅವರು ಸ್ಪರ್ಧಿಸುತ್ತಿದ್ದಾರೆ ಎಂದು ಹೇಳಿದರು. ಬಿ. ಸುದರ್ಶನ್ ರೆಡ್ಡಿ, ನಾಡಿದ್ದು, ತಮ್ಮ ನಾಮಪತ್ರ ಸಲ್ಲಿಸಲಿದ್ದಾರೆ ಎಂದು ಕಾಂಗ್ರೆಸ್ ಅಧ್ಯಕ್ಷರು ಮಾಹಿತಿ ನೀಡಿದ್ದಾರೆ.
ಧ್ವನಿ - ಮಲ್ಲಿಕಾರ್ಜುನ ಖರ್ಗೆ

<><><><>

ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್ ಇಂದಿನಿಂದ ಮೂರು ದಿನಗಳ ಕಾಲ ರಷ್ಯಾಗೆ ಭೇಟಿ ನೀಡಲಿದ್ದಾರೆ. ಅವರು ನಾಳೆ ಮಾಸ್ಕೋದಲ್ಲಿ ನಡೆಯಲಿರುವ ವ್ಯಾಪಾರ, ಆರ್ಥಿಕ, ವೈಜ್ಞಾನಿಕ, ತಾಂತ್ರಿಕ ಮತ್ತು ಸಾಂಸ್ಕೃತಿಕ ಸಹಕಾರ ಕುರಿತ ಭಾರತ-ರಷ್ಯಾ ಅಂತರ-ಸರ್ಕಾರಿ ಆಯೋಗದ ೨೬ನೇ ಅಧಿವೇಶನದ ಸಹ-ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಭೇಟಿಯ ಸಮಯದಲ್ಲಿ, ಡಾ. ಜೈಶಂಕರ್, ರಷ್ಯಾ ವಿದೇಶಾಂಗ ಸಚಿವ ಸೆರ್ಗೆಯ್ ಲಾವ್ರೊವ್ ಅವರೊಂದಿಗೆ ಚರ್ಚೆ ನಡೆಸಲಿದ್ದಾರೆ ಹಾಗೂ ಭಾರತ-ರಷ್ಯಾ ವ್ಯಾಪಾರ ವೇದಿಕೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

<><><><>

ರಾಜಸ್ಥಾನದ ಕೋಟಾ-ಬಂಡಿಯಲ್ಲಿ ಗ್ರೀನ್ ಫೀಲ್ಡ್ ವಿಮಾನ ನಿಲ್ದಾಣದ ಅಭಿವೃದ್ಧಿಗೆ ೧ ಸಾವಿರದ ೫೦೭ ಕೋಟಿ ರೂಪಾಯಿಗಳ ಅಂದಾಜು ವೆಚ್ಚದಲ್ಲಿ ಸಂಪುಟ ಅನುಮೋದನೆ ನೀಡಿದೆ ಎಂದು ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ನವದೆಹಲಿಯಲ್ಲಿಂದು ಮಾಧ್ಯಮಗಳಿಗೆ ಮಾಹಿತಿ ನೀಡಿದ್ದಾರೆ. ಒಡಿಶಾದಲ್ಲಿ ೮ ಸಾವಿರದ ೩೦೭ ಕೋಟಿ ರೂಪಾಯಿಗಳಿಗೂ ಹೆಚ್ಚು ವೆಚ್ಚದಲ್ಲಿ ೬-ಪಥದ ಪ್ರವೇಶ-ನಿಯಂತ್ರಿತ ರಾಜಧಾನಿ ಪ್ರದೇಶ ರಿಂಗ್ ರಸ್ತೆ ನಿರ್ಮಾಣಕ್ಕೂ ಸಂಪುಟ ಅನುಮೋದನೆ ನೀಡಿದೆ ಎಂದು ಅವರು ಹೇಳಿದ್ದಾರೆ.

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಭಾರತದ ಮಾಜಿ ರಾಷ್ಟ್ರಪತಿ ಡಾ. ಶಂಕರ್ ದಯಾಳ್ ಶರ್ಮಾ ಅವರ ಜನ್ಮ ದಿನಾಚರಣೆಯಂದು ರಾಷ್ಟ್ರಪತಿ ಭವನದಲ್ಲಿ ಇಂದು ಪುಷ್ಪ ನಮನ ಸಲ್ಲಿಸಿದರು. ಡಾ. ಶಂಕರ್ ದಯಾಳ್ ಶರ್ಮಾ ಭಾರತದ ೯ನೇ ರಾಷ್ಟ್ರಪತಿಯಾಗಿದ್ದರು.

<><><><>

ಕಳೆದ ಆರು ತಿಂಗಳುಗಳಲ್ಲಿ, ಚುನಾವಣಾ ಪ್ರಕ್ರಿಯೆಯನ್ನು ಸುಗಮಗೊಳಿಸುವ ಮತ್ತು ಸುಧಾರಿಸುವ ಗುರಿಯನ್ನು ಹೊಂದಿರುವ ಹಲವಾರು ಉಪಕ್ರಮಗಳನ್ನು ಚುನಾವಣಾ ಆಯೋಗ ಕೈಗೊಂಡಿದೆ. ಮತಗಟ್ಟೆಗಳಲ್ಲಿ ಶೇಕಡಾ ನೂರರಷ್ಟು ವೆಬ್‌ಕಾಸ್ಟಿಂಗ್, ಬಿಹಾರದಲ್ಲಿ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ, ರಾಜಕೀಯ ಪಕ್ಷಗಳು ನೇಮಿಸಿದ ಬೂತ್ ಮಟ್ಟದ ಏಜೆಂಟ್‌ಗಳ ತರಬೇತಿ ಮತ್ತು ರಾಷ್ಟ್ರ ರಾಜಧಾನಿಯಲ್ಲಿ ಬೂತ್ ಮಟ್ಟದ ಅಧಿಕಾರಿಗಳು ಮತ್ತು ಮೇಲ್ವಿಚಾರಕರ ತರಬೇತಿ ಸೇರಿದಂತೆ ಇಪ್ಪತ್ತೆಂಟು ಹೊಸ ಉಪಕ್ರಮಗಳನ್ನು ಜಾರಿಗೆ ತರಲಾಗಿದೆ ಎಂದು ಆಯೋಗ ತಿಳಿಸಿದೆ.

<><><>

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇಂದು ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರೊಂದಿಗೆ ದೂರವಾಣಿ ಮೂಲಕ ಮಾತನಾಡಿದರು. ಅವರು ಇತ್ತೀಚೆಗೆ ವಾಷಿಂಗ್ಟನ್‌ನಲ್ಲಿ ಝೆಲೆನ್ಸ್ಕಿ ಮತ್ತು ಯುರೋಪಿಯನ್ ನಾಯಕರೊಂದಿಗೆ ನಡೆಸಿದ ಮಾತುಕತೆಯ ನಂತರ ಈ ಸಂಭಾಷಣೆ ನಡೆಯಿತು ಎಂದು ಕ್ರೆಮ್ಲಿನ್ ತಿಳಿಸಿದೆ.

<><><>

ಮಹಾರಾಷ್ಟ್ರದ ಕೊಂಕಣ ಪ್ರದೇಶದಾದ್ಯಂತ ನಿರಂತರ ಮತ್ತು ಭಾರೀ ಮಳೆಯು ಸಾಮಾನ್ಯ ಜೀವನವನ್ನು ಅಸ್ತವ್ಯಸ್ತಗೊಳಿಸುತ್ತಿದೆ. ಕೆಲವು ದಿನಗಳ ಹಿಂದೆ ನಾಂದೇಡ್ ಜಿಲ್ಲೆಯಲ್ಲಿ ಸಂಭವಿಸಿದ ಮೇಘಸ್ಫೋಟ ಘಟನೆಯಲ್ಲಿ ಎಂಟು ಜನರು ಸಾವನ್ನಪ್ಪಿದ್ದಾರೆ ಎಂದು ವರದಿಯಾಗಿದೆ. ಜಿಲ್ಲೆಯಲ್ಲಿ ಮಳೆ ಮುಂದುವರೆದಿದ್ದು, ಹಸ್ನಾಲ್ ಗ್ರಾಮದ ಸುಮಾರು ೮೦ ಪ್ರತಿಶತ ಭಾಗವು ಜಲಾವೃತಗೊಂಡಿರುವುದರಿಂದ, ರಾಜ್ಯ ವಿಪತ್ತು ಪ್ರತಿಕ್ರಿಯೆ ಪಡೆಯೊಂದಿಗೆ ನಿಕಟ ಸಮನ್ವಯದೊಂದಿಗೆ ಭಾರತೀಯ ಸೇನಾ ತುಕಡಿಯು ಪ್ರವಾಹ ಪರಿಹಾರ ಕಾರ್ಯಾಚರಣೆಗಳನ್ನು ನಡೆಸುತ್ತಿದೆ. ಭಾರತೀಯ ಸೇನೆ ಕುಟುಂಬಗಳನ್ನು ಸುರಕ್ಷಿತ ಪ್ರದೇಶಗಳಿಗೆ ಸ್ಥಳಾಂತರಿಸುವಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದು, ಪ್ರವಾಹ ಪೀಡಿತ ನಿವಾಸಿಗಳಿಗೆ ಬೆಂಬಲ ನೀಡಲು ವೈದ್ಯಕೀಯ ಶಿಬಿರ ಹಾಗೂ ಆಹಾರ ವಿತರಣಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ.

<><><>

ಸೆಪ್ಟೆಂಬರ್‌ನಲ್ಲಿ ಯುಎಇಯಲ್ಲಿ ನಡೆಯಲಿರುವ ಏಷ್ಯಾ ಕಪ್ ಟಿ-೨೦ ಕ್ರಿಕೆಟ್ ಟೂರ್ನಿಗೆ ಭಾರತ ತಂಡ ಪ್ರಕಟಿಸಲಾಗಿದ್ದು, ಸೂರ್ಯಕುಮಾರ್ ಯಾದವ್ ಅವರನ್ನು ನಾಯಕನಾಗಿ ಮುಂದುವರಿಸಲಾಗಿದೆ. ಟೆಸ್ಟ್ ತಂಡದ ನಾಯಕ ಶುಭಮನ್ ಗಿಲ್ ಅವರನ್ನು ಉಪನಾಯಕರಾಗಿ ನೇಮಿಸಲಾಗಿದ್ದು, ತಂಡದಲ್ಲಿ ಪ್ರಮುಖವಾಗಿ ವೇಗಿ ಜಸ್‌ಪ್ರೀತ್ ಬುಮ್ರಾ ಮತ್ತು ಸ್ಪಿನ್ನರ್ ಕುಲದೀಪ್ ಯಾದವ್ ಅವರು ತಂಡಕ್ಕೆ ಪುನರಾಗಮನ ಕಂಡಿದ್ದಾರೆ. ಸುದ್ದಿಗೋಷ್ಠಿಯಲ್ಲಿಂದು ಬಿಸಿಸಿಐನ ಮುಖ್ಯ ಆಯ್ಕೆಗಾರ ಅಜಿತ್ ಅಗರ್ಕರ್ ಭಾರತ ತಂಡವನ್ನು ಘೋಷಿಸಿದರು.  ಈ ಮೊದಲು ಇಂಗ್ಲೆಂಡ್ ವಿರುದ್ಧ ನಡೆದ ಐದು ಪಂದ್ಯಗಳ ಟಿ-೨೦ ಸರಣಿಯಲ್ಲಿ ಭಾಗವಹಿಸಿದ್ದ ಅಭಿಷೇಕ್ ಶರ್ಮಾ, ತಿಲಕ್ ವರ್ಮಾ, ಹಾರ್ದಿಕ್ ಪಾಂಡ್ಯ, ಶಿವಂ ದುಬೆ, ಅಕ್ಷರ್ ಪಟೇಲ್, ಜಿತೇಶ್ ಶರ್ಮಾ, ಅರ್ಶದೀಪ್ ಸಿಂಗ್, ವರುಣ್ ಚಕ್ರವರ್ತಿ, ಸಂಜು ಸ್ಯಾಮ್ಸನ್, ಹರ್ಷಿತ್ ರಾಣಾ ಮತ್ತು ರಿಂಕು ಸಿಂಗ್ ತಮ್ಮ ಸ್ಥಾನವನ್ನು ಉಳಿಸಿಕೊಂಡಿದ್ದಾರೆ. ತಂಡದಲ್ಲಿ ಪ್ರಸಿದ್ಧ್ ಕೃಷ್ಣ, ವಾಷಿಂಗ್ಟನ್ ಸುಂದರ್, ರಿಯಾನ್ ಪರಾಗ್, ಧ್ರುವ್ ಜುರೆಲ್ ಮತ್ತು ಯಶಸ್ವಿ ಜೈಸ್ವಾಲ್ ಅವರನ್ನು ಸ್ಟ್ಯಾಂಡ್‌ಬೈ ಆಟಗಾರರಾಗಿ ಸೇರಿಸಲಾಗಿದೆ. ಎಂಟು ತಂಡಗಳು ಪಾಲ್ಗೊಳ್ಳುವ ಈ ಟಿ-೨೦ ಏಷ್ಯಾ ಕಪ್ ಟೂರ್ನಿ ಸೆಪ್ಟೆಂಬರ್ ೯ ರಿಂದ ೨೮ ರವರೆಗೆ ಅಬುಧಾಬಿ ಮತ್ತು ದುಬೈನಲ್ಲಿ ನಡೆಯಲಿದೆ. ಹಾಲಿ ಚಾಂಪಿಯನ್ ಭಾರತ,

ಪಾಕಿಸ್ತಾನ, ಒಮಾನ್ ಮತ್ತು ಯುಎಇ ತಂಡಗಳೊಂದಿಗೆ ‘ಎ’ ಗುಂಪಿನಲ್ಲಿ ಸ್ಥಾನ ಪಡೆದಿದೆ. ಸೆಪ್ಟೆಂಬರ್ ೧೦ರಂದು ಯುಎಇ ವಿರುದ್ಧ ಭಾರತ ತನ್ನ ಮೊದಲ ಪಂದ್ಯವನ್ನು ಆಡಲಿದ್ದು, ಸೆಪ್ಟೆಂಬರ್ ೧೪ರಂದು ಪಾಕಿಸ್ತಾನ ವಿರುದ್ಧ ಭಾರತ ಸೆಣಸಾಟ ನಡೆಸಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>